ಹಾಗೂ ರೆಸ್ಟೋರೆಂಟ್ ಮಾಲೀಕರ ಸಂಘದ ಅಧ್ಯಕ್ಷರು ಹಾಗೂ ಜಿಲ್ಲಾ ಮಟ್ಟದ ಹೋಟೆಲ್, ರೆಸ್ಟೋರೆಂಟ್ ಮಾಲೀಕರ ಸಂಘದ ಅಧ್ಯಕ್ಷರುಗಳಿಗೆ ದಿ:15–07–2014ರಂದು "Smoking Zone" ನಿರ್ಮಿಸಲು ಪತ್ರ ಬರೆಯಲಾಗಿದೆ. ಹಾಗೂ ಅಬಕಾರಿ ಆಯುಕ್ತರಿಗೂ ಸಹ ಬಾರ್ ಅಂಡ್ ರೆಸ್ಟೋರೆಂಟ್‌ಗಳಲ್ಲಿ ಈ ಬಗ್ಗೆ ಕ್ರಮವಹಿಸಲು ಕೋರಿ ಪತ್ರ ಬರೆಯಲಾಗಿದೆ.

ಬೆಂಗಳೂರಿನ ಕೇಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಧೂಮಪಾನ ಮಾಡಲಿಕ್ಕೆ ಪ್ರತ್ಯೇಕ ಕೊಠಡಿ ವ್ಯವಸ್ಥೆಯನ್ನು ಕೋಟ್ಪಾ ಕಾಯ್ದೆ–2003 ರಲ್ಲಿ ತಿಳಿಸಿರುವಂತೆ ನಿರ್ಮಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಪರಿಸ್ಥಿತಿಯ ಅಧ್ಯಯನ

3836(4314); ಶ್ರೀ ಗೋವಿಂದ ಎಂ. ಕಾರಜೋಳ (ಮುಧೋಳ)

ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿಯವರ ಹಾಗೂ ಪರಿಶಿಷ್ಟ ಪಂಗಡದವರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಪರಿಸ್ಥಿತಿಯನ್ನು ಅಧ್ಯಯನ ಮಾಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

ಆ) ಹಿಂದುಳಿದ ವರ್ಗದವರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಪರಿಸ್ಥಿತಿಯ ಅಧ್ಯಯನಕ್ಕಾಗಿ ಸರ್ಕಾರ 2013–14ನೇ ಸಾಲಿನ ಆಯವ್ಯಯದಲ್ಲಿ ಹಣ ನಿಗದಿ ಮಾಡಿ ಕ್ರಮ ಜರುಗಿಸಿದಂತೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು ?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಮತ್ತು ಆ) 2014–15ನೇ ಸಾಲಿನಲ್ಲಿ ಆಯವ್ಯಯ ಘೋಷಣೆಯಲ್ಲಿ ಸಮಾಜದಲ್ಲಿನ ಕೆಳಸ್ತರದ ವರ್ಗಗಳಿಗೆ ಸೇರಿದ ಪರಿಶಿಷ್ಟ ಜಾತಿ / ವರ್ಗ / ಹಿಂದುಳಿದ ವರ್ಗ ಮತ್ತು ಅಲೆಮಾರಿ ಜನಾಂಗಗಳನ್ನು

ಸಮಾಜದ ಮುಖ್ಯವಾಹಿನಿಗೆ ತರಲು ಅವಶ್ಯವಿರುವ ಅಂಶಗಳನ್ನು ಅಧ್ಯಯನ ಮಾಡಿ ಪರಿಹಾರೋಪಾಯಗಳನ್ನು ಸೂಚಿಸಲು ರಾಷ್ಟ್ರೀಯ ಕಾನೂನು ಶಾಲೆಯಲ್ಲಿ ತಳಸಮುದಾಯಗಳ ಅಧ್ಯಯನ ಕೇಂದ್ರವನ್ನು ತೆರೆಯಲು ₹ 1.00 ಕೋಟಿ ಅನುದಾನವನ್ನು ನಿಗದಿಪಡಿಸಲಾಗುವುದೆಂದು ಘೋಷಿಸಲಾಗಿದೆ. ಅದರಂತೆ ಅಧ್ಯಯನ ಕೇಂದ್ರವನ್ನು ತೆರೆಯಲು ಹಾಗೂ ಅನುದಾನವನ್ನು ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವುದು

3837(4749); ಶ್ರೀ ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ವಿವಿಧ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳ ಮತ್ತು ಆರೋಗ್ಯ ಕೇಂದ್ರ ಮತ್ತು ಘಟಕಗಳ ಸಂಖ್ಯೆ ಎಷ್ಟು; ಇವುಗಳ ಹಾಸಿಗೆ ಸಾಮರ್ಥ್ಯವೆಷ್ಟು; (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು);

ಆ) ಇಲ್ಲಿಗೆ ಬರುವ ರೋಗಿಗಳ ಸಂಖ್ಯೆಗೆ ಅನುಗುಣವಾಗಿ ಮತ್ತು ಉತ್ತಮ ಸೇವೆಯನ್ನು ಒದಗಿಸುವ ದೃಷ್ಟಿಯಿಂದ ಯಾವ ಯಾವ ಆಸ್ಪತ್ರೆಗಳನ್ನು ಮತ್ತು ಆರೋಗ್ಯ ಕೇಂದ್ರ ಮತ್ತು ಘಟಕಗಳನ್ನು ಮೇಲ್ದರ್ಜೆಗೇರಿಸಲಾಗುವುದು ಮತ್ತು ಎಷ್ಟು ಪ್ರಮಾಣದಲ್ಲಿ ಹಾಸಿಗೆಗಳ ಸಾಮರ್ಥ್ಯವನ್ನು ಹೆಚ್ಚಿಸಲಾಗುವುದು;

ಇ) ಇದಕ್ಕಾಗಿ ಪ್ರಸಕ್ತ ಆಯವ್ಯಯದಲ್ಲಿ ಎಷ್ಟು ಹಣವನ್ನು ವೆಚ್ಚ ಮಾಡಲಾಗುವುದು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 6 ಜಿಲ್ಲಾ ಆಸ್ಪತ್ರೆಗಳು, 25 ತಾಲ್ಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆಗಳು, 56 ಸಮುದಾಯ